ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	693
ಮಾನ್ಯ ಸದಸ್ಯರ ಹೆಸರು	ಶ್ರೀ ಪಿ.ಆರ್.ರಮೇಶ್
ಉತ್ತರಿಸಬೇಕಾದ ದಿನಾಂಕ	19.02.2018
ಉತ್ತರಿಸುವ ಸಚಿವರು	ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರಸ	ಪ್ರಶ್ನೆ	ಉತ್ತರ
ಅ)	ಕರ್ನಾಟಕ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ವಾಸವಾಗಿರುವ ವರ್ಗ 2ಎಗೆ ಸೇರಿದ ತಿಗಳ ಜನಾಂಗದವರಿಗೆ ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ 2013ರಿಂದ ಇಲ್ಲಿಯವರೆವಿಗೂ ವಿವಿಧ ಯೋಜನೆ ಹಾಗೂ ಕಾರ್ಯಕ್ರಮಗಳಿಂದ ಅನುಕೂಲ ಪಡೆದ ಫಲಾನುಭವಿಗಳ ಮಾಹಿತಿಯನ್ನು ವರ್ಷಾವಾರು ಹಾಗೂ ಜಿಲ್ಲಾವಾರು ನೀಡುವುದು;	ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ವತಿಯಿಂದ ಕರ್ನಾಟಕ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ವಾಸವಾಗಿರುವ ವರ್ಗ 2ಎಗೆ ಸೇರಿದ ತಿಗಳ ಜನಾಂಗದವರಿಗೆ 2013 ರಿಂದ ಇಲ್ಲಿಯವರೆವಿಗೂ ವಿವಿಧ ಯೋಜನೆ ಹಾಗೂ ಕಾರ್ಯಕ್ರಮಗಳಿಂದ ಅನುಕೂಲ ಪಡೆದ ಫಲಾನುಭವಿಗಳ ವರ್ಷಾವಾರು ಹಾಗೂ ಜಿಲ್ಲಾವಾರು ವಿವರಗಳು www.karnataka.gov.in/dbcdc ರಲ್ಲಿ ಲಭ್ಯವಿರುತ್ತದೆ.
ಆ)	ಕರ್ನಾಟಕ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ವಾಸವಾಗಿರುವ ವರ್ಗ 2ಎಗೆ ಸೇರಿದ ತಿಗಳ ಜನಾಂಗದವರಿಗೆ ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ 2013ರಿಂದ ಇಲ್ಲಿಯವರೆವಿಗೂ ಶಿಕ್ಷಣ ಹಾಗೂ ಉದ್ಯೋಗ ಅವಕಾಶಗಳನ್ನು ಕಲ್ಪಿಸಿರುವ ಬಗ್ಗೆ ಮಾಹಿತಿಯನ್ನು ವರ್ಷಾವಾರು ಹಾಗೂ ಜಿಲ್ಲಾವಾರು ನೀಡುವುದು;	ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ತಿಗಳ ಸಮಾಜದ ಅಭಿವೃದ್ಧಿಗಾಗಿ ಯೋಜನೆಗಳನ್ನು ಅನುಷ್ಠಾನಗೊಳಿಸಲು 2016-17 ಮತ್ತು 2017-18ನೇ ಸಾಲಿನಲ್ಲಿ ಪ್ರತ್ಯೇಕವಾಗಿ ಅನುದಾನ ಒದಗಿಸಲಾಗಿರುತ್ತದೆ. ಈ ಅನುದಾನದಿಂದ ಶಿಕ್ಷಣ ಮತ್ತು ಉದ್ಯೋಗಾವಕಾಶಗಳನ್ನು ಕಲ್ಪಿಸಲು 2016-17ನೇ ಸಾಲಿನಲ್ಲಿ 1310 ಫಲಾನುಭವಿಗಳಿಗೆ ರೂ.747.60ಲಕ್ಷಗಳು ಮತ್ತು 2017-18ನೇ ಸಾಲಿನ ಜನವರಿ-2018ರ ಅಂತ್ಯಕ್ಕೆ 997 ಫಲಾನುಭವಿಗಳಿಗೆ ರೂ.458.73ಲಕ್ಷಗಳಲ್ಲಿ ಶಿಕ್ಷಣ ಮತ್ತು ಉದ್ಯೋಗಾವಕಾಶಗಳನ್ನು ಕಲ್ಪಿಸಲಾಗಿದೆ. ಜಿಲ್ಲಾವಾರು ಹಾಗೂ ವರ್ಷಾವಾರು ಮಾಹಿತಿ ಮೇಲ್ಕಂಡ ಅನುಬಂಧಗಳಲ್ಲಿ ಸೇರ್ಪಡೆಯಾಗಿರುತ್ತದೆ.
ಇ)	ಕರ್ನಾಟಕ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ವಾಸವಾಗಿರುವ ವರ್ಗ 2ಎಗೆ ತಿಗಳ ಜನಾಂಗಕ್ಕೆ ಸೇರಿದ ಸಂಘಸಂಸ್ಥೆಗಳಿಗೆ 2013ರಿಂದ ಇಲ್ಲಿಯವರೆವಿಗೂ ಶೈಕ್ಷಣಿಕ ಹಾಗೂ ಸಾಮಾಜಿಕ ಬೆಳವಣಿಗೆ ಸರ್ಕಾರದಿಂದ ಮಂಜೂರಾತಿ ಹಾಗೂ ಬಿಡುಗಡೆಯಾಗಿರುವ ಸಂಪೂರ್ಣ ಮಾಹಿತಿಯನ್ನು ವರ್ಷಾವಾರು ಹಾಗೂ ಜಿಲ್ಲಾವಾರು ನೀಡುವುದು.	ನಿಗಮದಿಂದ ತಿಗಳ ಜನಾಂಗದ ಸಂಘ ಸಂಸ್ಥೆಗೆ ಶೈಕ್ಷಣಿಕ ಹಾಗೂ ಸಾಮಾಜಿಕ ಬೆಳವಣಿಗೆ ಅನುದಾನ ಒದಗಿಸುವ ಯಾವುದೇ ಯೋಜನೆ ಅನುಷ್ಠಾನಗೊಳಿಸುತ್ತಿರುವುದಿಲ್ಲ.

ಸಂ: ಹಿಂವಕ 320 ಬಿಎಂಎಸ್ 2018

(ಹೆಚ್.ಆಂಜನೇಯ)
ಸಮಾಜ ಕಲ್ಯಾಣ ಹಾಗೂ
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.